**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ., ರವರ ನ್ಯಾಯಾಲಯ, ನಂಜನಗೂಡು**

**ಸಿ.ಸಿಃ 913/2020**

| | | |
|---|---|---|
| ಸಾಕ್ಷಿದಾರರ ಹೆಸರು | **ಕೆಂಪಮ್ಮ** | **ಪ್ರಾಸಾಃ 01** |
| ತಂದೆಯ/ಗಂಡನ ಹೆಸರು | ಮಾದಶೆಟ್ಟಿ | **ಚಾಸಾಃ 01** |
| ವಯಸ್ಸು | 68 ವರ್ಷ | ದಿಃ 06.07.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು. |
| ಕೆಲಸ | ನಿರುದ್ಯೋಗಿ | |
| ವಾಸ | ತರದಲೆ ಗ್ರಾಮ | |

**ಮುಖ್ಯ ವಿಚಾರಣೆ ಪ್ರಾಜ್ಞ ಸ.ಸ.ಅ ರವರಿಂದಃ**

ಆರೋಪಿತರ ಪರಿಚಯ ಇದೆ. ನನಗೆ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಪೊಲೀಸರಿಗೆ ನಾನು ಯಾವುದೇ ದೂರು ಹಾಗೂ ಯಾವುದೇ ಮರು ಹೇಳಿಕೆ ನೀಡಿರುವುದಿಲ್ಲ. ಪೊಲೀಸರು ನನ್ನ ಸಮಕ್ಷಮ ಯಾವುದೇ ಮಹಜರ್ ಕ್ರಮ ಜರುಗಿಸಿರುವುದಿಲ್ಲ ಹಾಗೂ ಯಾವುದೇ ವಸ್ತುವನ್ನು ಅಮಾನತು ಪಡಿಸಿಕೊಂಡಿರುವುದಿಲ್ಲ.

ಸಾಕ್ಷಿ ನಿರಾಕರಿಸಿದ ಹೇಳಿಕೆಯನ್ನು ನಿ.ಪಿ. 3 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸಾಕ್ಷಿಯು ಪ್ರತಿಕೂಲ ಸಾಕ್ಷಿ ನುಡಿಯುತ್ತಿದ್ದಾರೆ. ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಅನುಮತಿ ನೀಡಲಾಯಿತು)

**ಪಾಟೀ ಸವಾಲುಃ ಪ್ರಾಜ್ಞ ಸ.ಸ.ಅ ರವರಿಂದಃ**

ದಿಃ 23.04.2020 ರಂದು ಸಂಜೆ 4 ಗಂಟೆ ಸಮಯದಲ್ಲಿ ನಮ್ಮ ಮನೆಯ ಮುಂಭಾಗ ನಮಗೆ ಸೇರಿದ ಹುಲ್ಲಿನ ಮೆದೆಗೆ ಆರೋಪಿ 1 ಮತ್ತು 2 ರವರು ದನಗಳನ್ನು ಬಿಟ್ಟು ಮೇಯಿಸುತ್ತಿದ್ದಾಗ ನಾನು ಹೋಗಿ ಕೇಳಿದ್ದಕ್ಕೆ ಆರೋಪಿಗಳು ಅವಾಚ್ಯ ಶಬ್ದಗಳಿಂದ ಬೈದು 2 ನೇ ಆರೋಪಿ ನನ್ನನ್ನು ಜಾಡಿಸಿ ತಳ್ಳಿದಾಗ ಕೆಳಗೆ ಬಿದ್ದಿದ್ದು, 1 ನೇ ಆರೋಪಿ ಮಚ್ಚಿನಿಂದ ನನ್ನ ಪಾದದ ಮೇಲ್ಭಾಗಕ್ಕೆ ಹೊಡೆದು ಗಾಯ ಪಡಿಸಿರುತ್ತಾರೆ ಎಂದರೆ ಸರಿಯಲ್ಲ.

ದಿಃ 20.05.2020 ರಂದು ಪೊಲೀಸರು ಕೃತ್ಯ ಸ್ಥಳಕ್ಕೆ ಬಂದಾಗ ನಾನು ಕೃತ್ಯ ಸ್ಥಳವನ್ನು ತೋರಿಸಿಕೊಟ್ಟಿದ್ದು ಚಾಸಾ 2 ಮತ್ತು 3 ರವರ ಸಮಕ್ಷಮ ಮಹಜರ್ ಕ್ರಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ಆಗ ಸಮಯ ಮಧ್ಯಾಹ್ನ 11.30 ರಿಂದ 12.15 ಗಂಟೆ ಆಗಿರುತ್ತದೆ ಎಂದರೆ ಸರಿಯಲ್ಲ. ಆಗ ನನ್ನೊಂದಿಗೆ ಚಾಸಾ 2 ಮತ್ತು 3 ರವರು ಹಾಜರಿದ್ದರು ಎಂದರೆ ಸರಿಯಲ್ಲ. ನಮ್ಮ ಸಮಕ್ಷಮ ಪೊಲೀಸರು ಮಚ್ಚನ್ನು ಅಮಾನತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ಈಗ ಓದಿ ಕೇಳಿಸಿಕೊಂಡ ನಿ.ಪಿ. 3 ರಂತೆ ಪೊಲೀಸರಿಗೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿ ಪರ ವಕೀಲರಿಂದ ಇಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆಃ ಇಲ್ಲ**

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ.ಹೇ.ಕೇ.ಸ.ಇದೆ.ಎಂ.ಒ**

1 **ನೇ ಹೆಚ್ಚುವರಿ ಸಿ.ಜೆ ಮತ್ತು ಜೆ.ಎಂ.ಎಫ್.ಸಿ**
**ನ್ಯಾಯಾಲಯ, ನಂಜನಗೂಡು**